ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 27–3–2015

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ ಹಾಗೂ ಭಾರತೀಯ ವಿದ್ಯಾಭವನದ ಮಾಧ್ಯಮ ಭಾರತಿ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಸಹಕಾರ – ಮಾಧ್ಯಮ ಮಂಥನ.<br><br>ಉದ್ಘಾಟನೆ:<br><br>ಶ್ರೀ ಕೆ. ಸತ್ಯನಾರಾಯಣ,<br>ನಿವೃತ್ತ ಪ್ರಧಾನ ಸಂಪಾದಕರು,<br>ಕನ್ನಡ ಪ್ರಭ, ಬೆಂಗಳೂರು<br><br>ಅಧ್ಯಕ್ಷತೆ:<br><br>ಶ್ರೀ ಬಿ.ಜಿ. ಬಣಕಾರ್,<br>ಮಾಜಿ ವಿಧಾನ ಸಭಾಧ್ಯಕ್ಷರು ಹಾಗೂ<br>ಹಿರಿಯ ಸಹಕಾರಿಗಳು | 28–03–2015<br>ಶನಿವಾರ<br>ಬೆಳಿಗ್ಗೆ<br>10–00 ಗಂಟೆಗೆ | ಭಾರತೀಯ ವಿದ್ಯಾಭವನ,<br>ಇ.ವಿ.ಎಸ್. ಸಭಾಂಗಣ,<br>ಡಿ. ದೇವರಾಜ ಅರಸು ರಸ್ತೆ,<br>(ರೇಸ್ ಕೋರ್ಸ್ ರಸ್ತೆ)<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಮಹಿಳಾ ಸರ್ಕಾರಿ ನೌಕರರಿಗೆ ವಿಶೇಷ ಅನುಮತಿ

ಬೆಂಗಳೂರು, ಮಾರ್ಚ್ 27 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ಮಾರ್ಚ್ 28 ರಂದು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಅಂತರ ರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಏರ್ಪಡಿಸಿದೆ.

ಅಂದು ಬ್ಯಾಂಕ್ವೆಟ್ ಹಾಲ್‌ನಲ್ಲಿ ನಡೆಯಲಿರುವ ಅಂತರ ರಾಷ್ಟ್ರೀಯ ಮಹಿಳಾ ದಿನಾಚರಣೆಯ ಸಮಾರಂಭದಲ್ಲಿ ಭಾಗವಹಿಸುವ ಬೆಂಗಳೂರು ನಗರ ವ್ಯಾಪ್ತಿಯ ಮಹಿಳಾ ಸರ್ಕಾರಿ ನೌಕರರಿಗೆ ಒಂದು ದಿನಕ್ಕೆ ಸೀಮಿತವಾಗಿ ವಿಶೇಷ ಅನುಮತಿ ನೀಡಲಾಗಿದೆ ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಪ್ರಕಟಣೆ ತಿಳಿಸಿದೆ.

ಬಾಬು:ಜಿಪಿಆರ್.

## ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

ಬೆಂಗಳೂರು, ಮಾರ್ಚ್ 27 (ಕರ್ನಾಟಕ ವಾರ್ತೆ)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಹೈದರಾಬಾದ್ ಕರ್ನಾಟಕ ಪ್ರದೇಶದಲ್ಲಿನ ಜಿಲ್ಲೆಗಳಲ್ಲಿ ಖಾಲಿ ಇರುವ 1582 ಗ್ರೂಪ್ 'ಡಿ' ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಏಪ್ರಿಲ್ 1 ರಿಂದ ಮೇ 30 ರವರೆಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಆಹ್ವಾನಿಸಿದೆ.

ಸದರಿ ಹುದ್ದೆಗಳಿಗೆ ನಿಗದಿಪಡಿಸಿದ ವಿದ್ಯಾರ್ಹತೆ, ವಯೋಮಿತಿ, ಮೀಸಲಾತಿ, ವರ್ಗೀಕರಣ, ಶುಲ್ಕ ಪಾವತಿಸುವ ವಿಧಾನ ಇತ್ಯಾದಿ ವಿವರಗಳನ್ನು www.karhfw.gov.in/drc.aspx ನಲ್ಲಿ ವೀಕ್ಷಿಸಬಹುದಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಕಟಣೆ ತಿಳಿಸಿದೆ.

ಬಾಬು:ಜಿಪಿಆರ್.

# ವಿಧಾನ ಮಂಡಲ ಕಲಾಪಗಳು:

## ವಿಧೇಯಕ ಮಂಡನೆ

ಬೆಂಗಳೂರು, ಮಾರ್ಚ್ 27 (ಕರ್ನಾಟಕ ವಾರ್ತೆ)

ಇಂದು ವಿಧಾನಸಭೆಯಲ್ಲಿ ಪ್ರವಾಸೋದ್ಯಮ ಮತ್ತು ಉನ್ನತ ಶಿಕ್ಷಣ ಖಾತೆ ಸಚಿವ ಶ್ರೀ ಆರ್. ವಿ. ದೇಶಪಾಂಡೆ ಅವರು ಕರ್ನಾಟಕ ಪ್ರವಾಸೋದ್ಯಮ ವ್ಯಾಪಾರ (ಸೌಲಭ್ಯ ಮತ್ತು ನಿಯಂತ್ರಣ) ವಿಧೇಯಕ – 2015 ಅನ್ನು ಮಂಡಿಸಿದರು.

ಬಾಬು:ಜಿಪಿಆರ್.

## ಮಕ್ಕಳ ಚಿತ್ರಗಳಿಗೆ ಸಹಾಯಧನಕ್ಕೆ ಸರ್ಕಾರದ ಚಿಂತನೆ

ಬೆಂಗಳೂರು, ಮಾರ್ಚ್ 27 (ಕರ್ನಾಟಕ ವಾರ್ತೆ)

ಮಕ್ಕಳ ಚಿತ್ರಗಳಿಗೂ ಸಹಾಯಧನ ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದ್ದು ಈ ಕುರಿತು ಪರಿಶೀಲನೆ ನಡೆಸಲಾಗುವುದೆಂದು ವಾರ್ತಾ ಸಚಿವ ಆರ್. ರೋಷನ್ ಬೇಗ್ ಅವರು ತಿಳಿಸಿದರು.

ವಿಧಾನ ಪರಿಷತ್ತಿನಲ್ಲಿಂದು ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯೆ ಡಾ ಜಯಮಾಲ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ವಾರ್ತಾ ಇಲಾಖೆಯಿಂದ ಇದುವರೆವಿಗೂ 20 ಪ್ರಾದೇಶಿಕ ಭಾಷಾ ಚಲನಚಿತ್ರಗಳಿಗೆ ಸಹಾಯಧನವನ್ನು ನೀಡಲಾಗಿದೆ ಎಂದರು.

ರಾಜ್ಯದ ಪ್ರಾದೇಶಿಕ ಭಾಷೆಯಾದ ತುಳು, ಕೊಡವ, ಕೊಂಕಣಿ, ಬಂಜಾರ ಬ್ಯಾರಿ ಮುಂತಾದ ಭಾಷೆಗಳಲ್ಲಿ ತಯಾರಿಸುವ ಚಿತ್ರಗಳಿಗೂ 10 ಲಕ್ಷ ರೂ. ಸಹಾಯಧನ ನೀಡಲಾಗುತ್ತಿದೆ. ಮುಂದೆ ಮಕ್ಕಳ ಚಿತ್ರಗಳಿಗೂ ಸಹಾಯಧನ ನೀಡುವ ಬಗ್ಗೆ ಪರಿಶೀಲಿಸಲಾಗುವುದೆಂದು ತಿಳಿಸಿದರು.

ಬಾಬು:ಪೂರ್ಣಿಮ:ಜಿಪಿಆರ್.

## ಮೆಗಾ ಟೂರಿಸಂಗೆ ಕೇಂದ್ರಕ್ಕೆ ಪ್ರಸ್ತಾವನೆ

ಬೆಂಗಳೂರು, ಮಾರ್ಚ್ 27 (ಕರ್ನಾಟಕ ವಾರ್ತೆ)

ಮೈಸೂರು, ಕೊಡಗು, ಚಾಮರಾಜನಗರ ಮತ್ತು ಮಂಡ್ಯ ಜಿಲ್ಲೆಗಳ ಪ್ರವಾಸಿ ಸ್ಥಳಗಳಲ್ಲಿ ಮೂಲಭೂತ ಸೌಲಭ್ಯ ಒದಗಿಸುವ ಸಲುವಾಗಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಪ್ರವಾಸೋದ್ಯಮ ಸಚಿವ ಆರ್.ವಿ. ದೇಶಪಾಂಡೆ ಅವರು ಹೇಳಿದರು.

ವಿಧಾನ ಪರಿಷತ್ ಸದಸ್ಯ ಎಸ್. ನಾಗರಾಜ್ ಅವರು ಪ್ರಶ್ನೋತ್ತರ ವೇಳೆಯಲ್ಲಿ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ಕೇಂದ್ರ ಸರ್ಕಾರವು ಪ್ರವಾಸೋದ್ಯಮದ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಿರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ರಾಜ್ಯದಲ್ಲಿರುವ 319 ಪ್ರವಾಸಿ ತಾಣಗಳ ಅಭಿವೃದ್ಧಿಗೆ ಹಲವು ಯೋಜನೆಗಳನ್ನು ರೂಪಿಸಲಾಗುತ್ತಿದೆ ಎಂದರು.

ಕಾವೇರಿ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ರಾಮನಗರ, ಮಂಡ್ಯ, ಕನಕಪುರ ಸುತ್ತಮುತ್ತಲ ಪ್ರವಾಸಿ ತಾಣಗಳನ್ನು ಅಭಿವೃದ್ಧಿ ಮಾಡಲಾಗುತ್ತದೆ. ಪ್ರವಾಸೋದ್ಯಮ ಅಭಿವೃದ್ಧಿಯಿಂದ ಸರ್ಕಾರಕ್ಕೆ ಆದಾಯ ಕೂಡ ಇರುತ್ತದೆ ಎಂದು ಸಚಿವರು ಅಭಿಪ್ರಾಯಪಟ್ಟರು. ಸದಸ್ಯ ನಾಗರಾಜ್ ಅವರು ಈಗ ಇರುವ ಜಂಗಲ್ ಲಾಡ್ಜ್‌ಗಳ

ಸಂಖ್ಯೆ ಕಡಿಮೆ ಇದ್ದು ಮೂರು ತಿಂಗಳ ಕಾಲ ಬುಕ್ಕಿಂಗ್‌ಗೆ ಕಾಯಬೇಕಾದ ಪರಿಸ್ಥಿತಿಯನ್ನು ಪ್ರವಾಸಿಗರು ಅನುಭವಿಸುತ್ತಿರುವುದರಿಂದ ಸರ್ಕಾರ ಮತ್ತಷ್ಟು ಜಂಗಲ್ ಲಾಡ್ಜ್‌ಗಳನ್ನು ಸರ್ಕಾರ ಮಾಡಬೇಕೆಂದು ಪ್ರಸ್ತಾಪಿಸಿದರು.

ಇದಕ್ಕೆ ಉತ್ತರಿಸಿದ ಸಚಿವರು ಪರಿಸರ ರಕ್ಷಣೆಯ ಜೊತೆಗೆ ಪ್ರವಾಸೋದ್ಯಮವನ್ನು ಬೆಳೆಸಬೇಕಾಗಿದೆ. ಆದ್ದರಿಂದ ಕಸ್ತೂರಿ ರಂಗನ್ ವರದಿಯಲ್ಲಿ ಪ್ರವಾಸೋದ್ಯಮಕ್ಕೆ ಅವಕಾಶ ಮಾಡಿಕೊಡುವಂತೆ ಒತ್ತಾಯಿಸಲಾಗಿದೆ. ಅಲ್ಲದೆ ಅರಣ್ಯದಲ್ಲಿ ಪ್ರಾಣಿ ಪಕ್ಷಿಗಳು, ಗಿಡಮರ ಹಾಗೂ ಪ್ರವಾಸಿಗರ ರಕ್ಷಣೆ ಸರ್ಕಾರದ ಜವಾಬ್ಧಾರಿಯಾಗಿರುವುದರಿಂದ ಜಂಗಲ್ ಲಾಡ್ಜ್‌ಗಳನ್ನು ಪ್ರಾರಂಭಿಸುವುದು ಅಷ್ಟು ಸುಲಭದ ವಿಷಯವಲ್ಲವೆಂದರು.

ಬಾಬು:ಪೂರ್ಣಿಮ:ಜಿಪಿಆರ್.

## ವಿಧಾನ ಪರಿಷತ್ತಿನಲ್ಲಿ ಎರಡು ವಿಧೇಯಕಗಳಿಗೆ ಅಂಗೀಕಾರ

ಬೆಂಗಳೂರು, ಮಾರ್ಚ್ 27 (ಕರ್ನಾಟಕ ವಾರ್ತೆ)

ವಿಧಾನಸಭೆಯಿಂದ ಅಂಗೀಕೃತವಾದ ರೂಪದಲ್ಲಿದ್ದ 2015ನೇ ಸಾಲಿನ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ವಿಧೇಯಕ ಹಾಗೂ 2015ನೇ ಸಾಲಿನ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ವಿಧಾನ ಪರಿಷತ್ತಿನಲ್ಲಿ ಅಂಗೀಕರಿಸಲಾಯಿತು.

ಸಭಾಪತಿ ಡಾ. ಹೆಚ್. ಶಂಕರಮೂರ್ತಿ ಅವರು ವಿಧೇಯಕವನ್ನು ಧ್ವನಿ ಮತಕ್ಕೆ ಹಾಕುವ ಮೂಲಕ ವಿಧೇಯಕವು ಅಂಗೀಕಾರವಾಗಿದೆ ಎಂದು ಪ್ರಕಟಿಸಿದರು.

ಬಾಬು:ಪೂರ್ಣಿಮ:ಜಿಪಿಆರ್.

## ವಿಧಾನ ಪರಿಷತ್ತಿನಲ್ಲಿ ಅಟಲ್ ಬಿಹಾರಿ ವಾಜಪೇಯಿ ಅವರಿಗೆ ಅಭಿನಂದನೆ

ಬೆಂಗಳೂರು, ಮಾರ್ಚ್ 27 (ಕರ್ನಾಟಕ ವಾರ್ತೆ)

ಭಾರತರತ್ನ ಪ್ರಶಸ್ತಿಗೆ ಭಾಜನರಾಗಿರುವ ಅಟಲ್ ಬಿಹಾರಿ ವಾಜಪೇಯಿ ಅವರಿಗೆ ಇಂದು ಭಾರತ ರತ್ನ ನೀಡಿ ಗೌರವಿಸಲಾಗುತ್ತಿರುವುದಕ್ಕೆ ವಿಧಾನ ಪರಿಷತ್ತಿನಲ್ಲಿ ಅಭಿನಂದನೆಯನ್ನು ಸಲ್ಲಿಸಲಾಯಿತು.

ಹಿರಿಯ ರಾಜಕಾರಣಿ ಅಟಲ್ ಬಿಹಾರಿ ವಾಜಪೇಯಿ ಅವರಿಗೆ ನಾಗರೀಕ ಅತ್ಯುನ್ನತ ಪ್ರಶಸ್ತಿಯಾದ ಭಾರತ ರತ್ನ ಪ್ರಶಸ್ತಿ ದೊರಕಿರುವುದಕ್ಕೆ ವಿಧಾನ ಪರಿಷತ್ತಿನ ಸಭಾನಾಯಕ ಎಸ್.ಆರ್. ಪಾಟೀಲ್, ಸಚಿವ ಆರ್. ವಿ. ದೇಶಪಾಂಡೆ, ವಿರೋಧ ಪಕ್ಷದ ನಾಯಕ ಕೆ. ಎಸ್. ಈಶ್ವರಪ್ಪ ಹಾಗೂ ಸಭಾಪತಿ ಡಾ. ಹೆಚ್. ಶಂಕರಮೂರ್ತಿ ಅವರು ಅಭಿನಂದನೆ ಸಲ್ಲಿಸಿ ಜೊತೆಗೆ ಕಾರ್ಯವೈಖರಿ ಹಾಗೂ ಅವರ ವಿಶಾಲ ಹೃದಯ ಮನೋಭಾವದ ಬಗ್ಗೆ ಮೆಲುಕು ಹಾಕಿದರು.

ಬಾಬು:ಪೂರ್ಣಿಮ:ಜಿಪಿಆರ್.

## ಎಲ್ಲಾ ಜಿಲ್ಲೆಗಳಲ್ಲಿ ಜಿರಿಯಾಟ್ರಿಕ್ ಸೆಂಟರ್ ತೆರೆಯಲು ಕ್ರಮ

ಬೆಂಗಳೂರು, ಮಾರ್ಚ್ 27 (ಕರ್ನಾಟಕ ವಾರ್ತೆ)

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಜಿರಿಯಾಟ್ರಿಕ್ ಸೆಂಟರ್ ತೆರೆಯಲು ಸೂಕ್ತ ಕ್ರಮ ವಹಿಸಲಾಗುವುದೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಶ್ರೀಮತಿ ಉಮಾಶ್ರೀ ಅವರು ಭರವಸೆ ನಿಡಿದ್ದಾರೆ.

ರಾಜ್ಯದ ಆರು ಜಿಲ್ಲೆಗಳಾದ ತುಮಕೂರು, ಕೋಲಾರ, ಬಿಜಾಪುರ, ಕೊಡಗು, ಚಿಕ್ಕಮಗಳೂರು ಮತ್ತು ಧಾರವಾಡ ಜಿಲ್ಲೆಗಳ ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ಆರೋಗ್ಯ ಸೌಲಭ್ಯಗಳನ್ನು ಹಿರಿಯ ನಾಗರಿಕರಿಗೆ ನೀಡುವ ಸಲುವಾಗಿ ಜಿರಿಯಾಟ್ರಿಕ್ ಕೇಂದ್ರವನ್ನು ಸ್ಥಾಪಿಸಲಾಗಿದೆ ಎಂದರು.

ವಿಧಾನ ಪರಿಷತ್ ಸದಸ್ಯ ಬಸವರಾಜ ಹೊರಟ್ಟಿ ಅವರು ಹಿರಿಯ ನಾಗರಿಕರ ಆರೋಗ್ಯದ ದೃಷ್ಟಿಯಿಂದ ಎಲ್ಲಾ ಜಿಲ್ಲೆಗಳಲ್ಲಿ ಜಿರಿಯಾಟ್ರಿಕ್ ಕೇಂದ್ರ ತೆರೆಯುವಂತೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ಆರೋಗ್ಯ ಸಚಿವರೊಂದಿಗೆ ಈ ಬಗ್ಗೆ ಈಗಾಗಲೇ ಚರ್ಚಿಸಿದ್ದೇನೆ. ಆರೋಗ್ಯ ಇಲಾಖೆಯ ಸಹಯೋಗದೊಂದಿಗೆ ಎಲ್ಲಾ ಜಿಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಜಿರಿಯಾಟ್ರಿಕ್ ಸೆಂಟರ್ ತೆರೆಯಲು ಕ್ರಮ ಕೈಗೊಳ್ಳಲಾಗುವುದೆಂದರು.

ರಾಜ್ಯದಲ್ಲಿ ಇದುವರೆವಿಗೆ 10.33 ಲಕ್ಷ ಹಿರಿಯ ನಾಗರಿಕರಿಗೆ ಗುರುತಿನ ಚೀಟಿಯನ್ನು ವಿತರಿಸಲಾಗಿದ್ದು ಫೆಬ್ರವರಿ 2015 ರ ಅಂತ್ಯಕ್ಕೆ 6,12,170 ಫಲಾನುಭವಿಗಳಿಗೆ ವೃದ್ಧಾಪ್ಯ ವೇತನ ಹಾಗೂ 18,57,959 ಹಿರಿಯ ನಾಗರಿಕರಿಗೆ ಸಂಧ್ಯಾ ಸುರಕ್ಷಾ ಯೋಜನೆಯ ಸೌಲಭ್ಯವನ್ನು ಪಡೆಯುತ್ತಿದ್ದಾರೆಂದು ಸದನಕ್ಕೆ ಮಾಹಿತಿ ನೀಡಿದರು.

ಬಾಬು:ಪೂರ್ಣಿಮ:ಜಿಪಿಆರ್.

## ಪ್ರವಾಸ

ಬೆಂಗಳೂರು, ಮಾರ್ಚ್ 27 (ಕರ್ನಾಟಕ ವಾರ್ತೆ)

ಕರ್ನಾಟಕ ವಿಧಾನ ಸಭೆಯ ಸರ್ಕಾರಿ ಮುಖ್ಯ ಸಚೇತಕ ಶ್ರೀ ಅಶೋಕ ಮಹಾದೇವಪ್ಪ ಪಟ್ಟಣ್ (ಶ್ರೀ ಪಿ.ಎಂ. ಅಶೋಕ್) ಅವರು ಮಾರ್ಚ್ 30 ರವರೆಗೆ ಬೆಳಗಾವಿ, ಧಾರವಾಡ ಜಿಲ್ಲೆಗಳಲ್ಲಿ ಪ್ರವಾಸ ಮಾಡುವರು.

# ಬೇಕರಿ ತರಬೇತಿ

ಬೆಂಗಳೂರು ಮಾರ್ಚ್ 27 (ಕರ್ನಾಟಕ ವಾರ್ತೆ) :

ಬೆಂಗಳೂರು ಕೃಷಿ ವಿಶ್ವವಿದ್ಯಾಲಯ ಬೇಕರಿ ತರಬೇತಿ ಕೇಂದ್ರದಿಂದ ಹದಿನಾಲ್ಕು ವಾರಗಳ ಬೇಕರಿ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಅಭ್ಯರ್ಥಿಯು ಕನಿಷ್ಠ ಎಸ್.ಎಸ್.ಎಲ್.ಸಿ. ಪಾಸಾಗಿರಬೇಕು. ರೂ. 10-00 ಪಾವತಿಸಿ ನಿಗದಿತ ಅರ್ಜಿ ಪಡೆಯಬೇಕು. ಅರ್ಜಿಯನ್ನು ದಿನಾಂಕ 15-4-2015 ರೊಳಗೆ ನೋಂದಾಯಿಸಬೇಕು. ಹೆಚ್ಚಿನ ವಿವರಗಳಿಗೆ ಸಂಯೋಜಕರು, ಬೇಕರಿ ತರಬೇತಿ ಕೇಂದ್ರ ವಿಸ್ತರಣಾ

ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು 560 024 ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 080- 23513370 ಮೂಲಕ ಸಂಪರ್ಕಿಸಬಹುದು.

ಬಾಬು/ಕೆಎಂ/